# ವಿಧಾನ ಪರಿಷತ್ ಚುನಾವಣೆಗಳಲ್ಲಿ ಮತ ಚಲಾಯಿಸುವ ಬಗ್ಗೆ ಸೂಚನೆಗಳು

## ಎ. ಮತದಾನದ ವಿಧಾನ

1. ಮತ ಚಲಾಯಿಸುವ ಉದ್ದೇಶಕ್ಕಾಗಿ, ಚುನಾವಣಾಧಿಕಾರಿಯು ಮತಪತ್ರದೊಡನೆ ನಿಮಗೆ ನೀಡುವ ನೇರಳೆ ಬಣ್ಣದ ಸ್ಕೆಚ್ ಪೆನ್ನನ್ನು ಮಾತ್ರ ಬಳಸಿ ಮತ ಚಲಾಯಿಸಿ. ಬೇರೆ ಯಾವುದೇ ಪೆನ್ನು, ಪೆನ್ಸಿಲ್ಲು, ಬಾಲ್ ಪಾಯಿಂಟ್ ಪೆನ್ನು ಅಥವಾ ಗುರುತು ಮಾಡುವ ಯಾವುದೇ ಇತರ ಸಾಧನವನ್ನು ಬಳಸಿ ಮತ ಚಲಾಯಿಸಿದರೆ, ನಿಮ್ಮ ಮತವನ್ನು ಅಸಿಂಧು ಎಂದು ಪರಿಗಣಿಸಲಾಗುವುದು.

2. ನಿಮ್ಮ ಮೊದಲನೇ ಪ್ರಾಶಸ್ತ್ಯವಾಗಿ ನೀವು ಯಾವ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಳ್ಳುವಿರೋ, ಆ ಅಭ್ಯರ್ಥಿಯ ಹೆಸರಿನ ಮುಂದೆ ಒದಗಿಸಲಾಗಿರುವ, "ಪ್ರಾಶಸ್ತ್ಯ ಕ್ರಮ" ಎಂದು ಗುರುತು ಮಾಡಲಾಗಿರುವ ಅಂಕಣದಲ್ಲಿ ಅಂಕಿ "1"ನ್ನು ಗುರುತು ಹಾಕುವ ಮೂಲಕ ನಿಮ್ಮ ಮತ ನೀಡಿ. ಈ ಅಂಕಿ "1"ನ್ನು ಒಬ್ಬನೇ ಒಬ್ಬ ಅಭ್ಯರ್ಥಿಯ ಹೆಸರಿನ ಮುಂದೆ ಮಾತ್ರ ಗುರುತು ಹಾಕಬೇಕು.

3. ಒಬ್ಬರಿಗಿಂತ ಹೆಚ್ಚು ಅಭ್ಯರ್ಥಿಗಳನ್ನು ಚುನಾಯಿಸಬೇಕಿದ್ದ ಪಕ್ಷದಲ್ಲಿ ಸಹ, ಅಂಕಿ "1"ನ್ನು ಕೇವಲ ಒಬ್ಬನೇ ಒಬ್ಬ ಅಭ್ಯರ್ಥಿಯ ಹೆಸರಿನ ಮುಂದೆ ಮಾತ್ರ ಗುರುತು ಹಾಕಬೇಕು.

4. ಉಳಿದ ಅಭ್ಯರ್ಥಿಗಳಿಗೆ ನಿಮ್ಮ ಮುಂದಿನ ಪ್ರಾಶಸ್ತ್ಯಗಳನ್ನು ಗುರುತು ಹಾಕುವುದಕ್ಕಾಗಿ, ಅಂಥ ಅಭ್ಯರ್ಥಿಗಳ ಹೆಸರುಗಳ ಮುಂದೆ ಒದಗಿಸಲಾಗಿರುವ "ಪ್ರಾಶಸ್ತ್ಯ ಕ್ರಮ" ಎಂಬ ಅಂಕಣದಲ್ಲಿ ತರುವಾಯದ ಅಂಕಿಗಳಾದ 2, 3, 4 ಇತ್ಯಾದಿಗಳನ್ನು ನಿಮ್ಮ ಪ್ರಾಶಸ್ತ ಕ್ರಮದಲ್ಲಿ ಗುರುತು ಹಾಕುವ ಮೂಲಕ ನಿಮ್ಮ ಮತ ನೀಡಿ.

5. ಚುನಾಯಿಸಬೇಕಾಗಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟೇ ಇದ್ದರೂ, ಸ್ಪರ್ಧಿಸಿರುವ ಅಭ್ಯರ್ಥಿಗಳ ಸಂಖ್ಯೆಯಷ್ಟೇ ಪ್ರಾಶಸ್ತ್ಯಗಳನ್ನು ನೀವು ಹೊಂದಿರುತ್ತೀರಿ. ಉದಾಹರಣಗೆ: ಚುನಾಯಿಸಬೇಕಾಗಿರುವ ಸ್ಥಾನ ಒಂದು ಅಥವಾ ಎರಡು ಆಗಿದ್ದು, ಐದು ಜನ ಅಭ್ಯರ್ಥಿಗಳು ಸ್ಪರ್ಧಿಸಿದ್ದಲ್ಲಿ, ನಿಮ್ಮ ಪ್ರಾಶಸ್ತ್ಯದ ಕ್ರಮದಲ್ಲಿ ಐದು ಪ್ರಾಶಸ್ತ್ಯಗಳನ್ನು ಗುರುತು ಹಾಕಬಹುದು.

6. ಯಾರೇ ಒಬ್ಬ ಅಭ್ಯರ್ಥಿಯ ಹೆಸರಿನ ಮುಂದೆ ಕೇವಲ ಒಂದು ಅಂಕಿಯನ್ನು ಮಾತ್ರ ನೀವು ಗುರುತು ಹಾಕಿರುವುದನ್ನು ಖಚಿತಪಡಿಸಿಕೊಳ್ಳಿ ಮತ್ತು ಅದೇ ಅಂಕಿಯನ್ನು ಒಬ್ಬರಿಗಿಂತ ಹೆಚ್ಚು ಅಭ್ಯರ್ಥಿಗಳ ಹೆಸರುಗಳ ಮುಂದೆ ಗುರುತು ಹಾಕಿರುವುದಿಲ್ಲ ಎಂಬುದನ್ನು ಸಹ ಖಚಿತಪಡಿಸಿಕೊಳ್ಳಿ.

7. ಪ್ರಾಶಸ್ತ್ಯವನ್ನು ಅಂಕಿಗಳ ಮೂಲಕ ಮಾತ್ರ ಎಂದರೆ, 1, 2, 3, ಇತ್ಯಾದಿ ಕ್ರಮದಲ್ಲಿ ಮಾತ್ರ ಗುರುತು ಹಾಕಬೇಕು. ಇದರ ಬದಲಾಗಿ ಒಂದು, ಎರಡು, ಮೂರು, ಇತ್ಯಾದಿ ಅಕ್ಷರಗಳ ರೂಪದಲ್ಲಿ ಬರೆಯಬಾರದು.

8. ಅಂಕಿಗಳನ್ನು 1, 2, 3 ಇತ್ಯಾದಿ ಅಂತಾರಾಷ್ಟ್ರೀಯ ರೂಪದ ಭಾರತೀಯ ಅಂಕಿಗಳಲ್ಲಿ ಅಥವಾ I, II, III ಇತ್ಯಾದಿ ರೋಮನ್ ಅಂಕಿಗಳ ರೂಪದಲ್ಲಿ ಅಥವಾ ಸಂವಿಧಾನದ ಎಂಟನೇ ಅನುಸೂಚಿಯಲ್ಲಿ ಮಾನ್ಯ ಮಾಡಲಾಗಿರುವ ಭಾರತದ ಯಾವುದೇ ಭಾಷೆಯಲ್ಲಿ ಬಳಸಲಾಗುವ ಅಂಕಿಗಳ ರೂಪದಲ್ಲಿ ಗುರುತು ಹಾಕಬಹುದಾಗಿದೆ.

9. ಮತಪತ್ರದ ಮೇಲೆ ನಿಮ್ಮ ಹೆಸರು ಅಥವಾ ಯಾವುದೇ ಪದಗಳನ್ನು ಬರೆಯಬೇಡಿ ಮತ್ತು ನಿಮ್ಮ ಸಹಿ ಅಥವಾ ಇನ್ಷಿಯಲ್‌ಗಳನ್ನು ಹಾಕಬೇಡಿ. ಅಲ್ಲದೆ, ನಿಮ್ಮ ಹೆಬ್ಬೆಟ್ಟಿನ ಗುರುತನ್ನೂ ಸಹ ಹಾಕಬೇಡಿ. ಹೀಗೆ ಮಾಡುವುದರಿಂದ ನಿಮ್ಮ ಮತಪತ್ರ ಅಸಿಂಧುವಾಗುತ್ತದೆ.

10. ನಿಮ್ಮ ಪ್ರಾಶಸ್ತ್ಯವನ್ನು ಸೂಚಿಸುವುದಕ್ಕಾಗಿ, ನಿಮ್ಮ ಆಯ್ಕೆಯ ಅಭ್ಯರ್ಥಿಗಳ ಹೆಸರುಗಳ ಮುಂದೆ ಅಂಕಿಯನ್ನಲ್ಲದೇ ಇನ್ನಾವುದೇ ಚಿಹ್ನೆ ಅಥವಾ "X" ಗುರುತನ್ನು ಹಾಕಬೇಡಿ. ಅಂಥ ಮತಪತ್ರವನ್ನು ತಿರಸ್ಕರಿಸಲಾಗುವುದು. ಆದ್ದರಿಂದ, ನಿಮ್ಮ ಪ್ರಾಶಸ್ತ್ಯಗಳನ್ನು ಈ ಮೇಲೆ ವಿವರಿಸಿರುವಂತೆ 1, 2, 3 ಇತ್ಯಾದಿ ಅಂಕಿಗಳಲ್ಲಿ ಮಾತ್ರ ಸೂಚಿಸಿ.

11. ನಿಮ್ಮ ಮತಪತ್ರವನ್ನು ಸಿಂಧು ಎಂದು ಪರಿಗಣಿಸುವುದಕ್ಕಾಗಿ ಅಭ್ಯರ್ಥಿಗಳ ಪೈಕಿ ಒಬ್ಬನೇ ಒಬ್ಬ ಅಭ್ಯರ್ಥಿಯ ಹೆಸರಿನ ಮುಂದೆ ಅಂಕಿ "1"ನ್ನು ಗುರುತು ಹಾಕುವ ಮೂಲಕ ನೀವು ನಿಮ್ಮ ಮೊದಲ ಪ್ರಾಶಸ್ತ್ಯವನ್ನು ಸೂಚಿಸುವುದು ಅವಶ್ಯಕವಾಗಿದೆ. ನೀವು ಎರಡನೆಯ ಅಥವಾ ತರುವಾಯದ ಪ್ರಾಶಸ್ತ್ಯಗಳನ್ನು ಸೂಚಿಸಬಹುದಾಗಿದೆ ಅಥವಾ ಸೂಚಿಸದೇ ಇರಬಹುದಾಗಿದೆ.